# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 2740

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ : 28.03.2022

ಉತ್ತರಿಸುವ ಸಚಿವರು : ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಷ್ಯಾ-ಉಕ್ರೇನ್ ನಡುವೆ ನಡೆಯುತ್ತಿರುವ ಯುದ್ಧದ ಪರಿಣಾಮಗಳಿಂದ ಜನ ಸಾಮಾನ್ಯರು ದಿನ ನಿತ್ಯ ಬಳಸುವಂತಹ ಪೆಟ್ರೋಲ್, ಡೀಸೆಲ್, ಕಬ್ಬಿಣ, ಅಡುಗೆ ಎಣ್ಣೆ, ಬೇಳೆ ಮತ್ತು ಇತರೆ ದಿನಬಳಕೆ ವಸ್ತುಗಳ ಬೆಲೆ ಏರಿಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಬಂದಿದ್ದಲ್ಲಿ, ಸದರಿ ವಸ್ತುಗಳ ಬೆಲೆ ಏರಿಕೆಯು ಜನ ಸಾಮಾನ್ಯರಿಗೆ ಹೊರೆಯಾಗದಂತೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಖಾದ್ಯತೈಲ ಮತ್ತು ಖಾದ್ಯತೈಲ ಬೀಜಗಳ ಅನಧಿಕೃತ ಬೆಲೆ ಏರಿಕೆಯನ್ನು ನಿಯಂತ್ರಿಸಲು ಚಿಲ್ಲರೆ, ಸಗಟು ವ್ಯಾಪಾರಿಗಳು ಮತ್ತು ದೊಡ್ಡ ಮಟ್ಟದ ಗ್ರಾಹಕರುಗಳಿಗೆ ದಾಸ್ತಾನು ಮಿತಿಯನ್ನು ನಿಗಧಿಪಡಿಸಿ ಆದೇಶಿಸಲಾಗಿದೆ.<br>ಅಗತ್ಯ ವಸ್ತುಗಳನ್ನು ಅನಧಿಕೃತವಾಗಿ ದಾಸ್ತಾನು ಮಾಡಿರುವ ಬಗ್ಗೆ ರಾಜ್ಯದಾದ್ಯಂತ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳು ಆಗಿಂದ್ದಾಗ್ಗೆ ತಪಾಸಣೆಯನ್ನು ಕೈಗೊಳ್ಳುತ್ತಿದ್ದು, ಇದರೊಂದಿಗೆ ಪೆಟ್ರೋಲ್ ಮತ್ತು ಡಿಸೇಲ್ ಪಂಪ್‌ಗಳನ್ನು ಸಹ ಇಲಾಖೆ ವತಿಯಿಂದ ತಪಾಸಣೆ ನಡೆಸಿ ಸುಗಮ ಹಾಗೂ ನಿಖರ ಪ್ರಮಾಣದಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

| | | |
|---|---|---|
| ಇ | ಸದರಿ ದೇಶಗಳ ನಡುವೆ ಯುದ್ಧ ಪ್ರಾರಂಭವಾದ ನಂತರ ರಾಜ್ಯದ ಕೆಲವು ಸೂಪರ್ ಮಾರ್ಕೆಟ್ ಮತ್ತು ಸಗಟು ವ್ಯಾಪಾರಿಗಳು ದಿನನಿತ್ಯದ ಬಳಕೆ ವಸ್ತುಗಳನ್ನು ಅಕ್ರಮ ದಾಸ್ತಾನು ಮಾಡಿಕೊಂಡು ಕೃತಕ ಬೇಡಿಕೆ ಸೃಷ್ಟಿಸಿ ಗ್ರಾಹಕರಿಂದ ದುಪ್ಪಟ್ಟು ದರ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು) | ಬಂದಿದೆ.<br>ಸೂಪರ್ ಮಾರ್ಕೆಟ್‌ಗಳು, ಸಗಟು ವ್ಯಾಪಾರಿಗಳು ಮತ್ತು ಚಿಲ್ಲರೆ ವ್ಯಾಪಾರಿಗಳು ಅನಧಿಕೃತವಾಗಿ ಅಗತ್ಯ ವಸ್ತುಗಳನ್ನು ಸಂಗ್ರಹಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ತಪಾಸಣೆಯನ್ನು ನಡೆಸಲಾಗುತ್ತಿದ್ದು, ಇದುವರೆಗೆ 75 ಮೊಕದ್ದಮೆಗಳನ್ನು ಹೂಡಲಾಗಿದ್ದು, 29 ಮೊಕದ್ದಮೆಗಳಲ್ಲಿ 2,96,000 ಗಳ ದಂಡವನ್ನು ವಸೂಲಿ ಮಾಡಲಾಗಿರುತ್ತದೆ. |

ಆನಾಸ 82 ಆರ್‌ಪಿಆರ್ 2022 (ಇ-ಆಫೀಸ್)

(ಉಮೇಶ ವಿ. ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.